10. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು ಈ ಮೂಲಕ ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.
11. ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ 5021 ಅರೆವೈದ್ಯಕೀಯ ಹುದ್ದೆಗಳನ್ನು ನೇಮಕಾತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಅದು ಪೂರ್ಣಗೊಂಡ ನಂತರ ಆದ್ಯತಾನುಸಾರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುವುದು.
12. ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ 562 ವೈದ್ಯರ ಹಾಗೂ 224 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗಿದೆ.
13. ಪ್ರಸ್ತುತ ಗ್ರೂಪ್-ಡಿ ನೌಕರರ ವೃಂದದಲ್ಲಿ ನೇಮಕಾತಿ ಮಾಡಲು ನಿಷೇಧವಿದ್ದು, ಅವಶ್ಯವಿರುವೆಡೆ ಬಾಹ್ಯ ಮೂಲಗಳಿಂದ ಸೇವೆ ಪಡೆದು ನಿರ್ವಹಿಸಲು ಕ್ರಮವಹಿಸಲಾಗಿದೆ.

ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆ ಬಾವಿ ಕೊರೆಯುವುದು

928 (1130) ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ 2006-07, 2007-08 ಮತ್ತು 2008-09ನೇ ಸಾಲಿನಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ನಿಗಮದಡಿಯಿಂದ ಗಂಗಾ ಕಲ್ಯಾಣ ಯೋಜನೆಯಡಿ ಕೊರೆದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು;

ಆ) ಈ ಮೂರು ವರ್ಷಗಳಲ್ಲಿ ಎಷ್ಟು ಕೊಳವೆ ಬಾವಿಗಳಿಗೆ ವಿದ್ಯುಚ್ಛಕ್ತಿ ಪೂರೈಸಲಾಗಿದೆ (ಮಾಹಿತಿ ನೀಡುವುದು)?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ) ರಾಜ್ಯದಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಪರಿಶಿಷ್ಟ ಜಾತಿಯ ಕುಟುಂಬಗಳಿಗೆ ಕಳೆದ 3 ವರ್ಷಗಳಲ್ಲಿ ಕೊರೆದ ಕೊಳವೆಬಾವಿಗಳ ವಿವರ:

ವರ್ಷ	ಕೊರೆದ ಕೊಳವೆ ಬಾವಿಗಳ ಸಂಖ್ಯೆ
2006–07	5439
2007–08	8582
2008–09	5161

ಆ) ವಿದ್ಯುಚ್ಛಕ್ತಿ ಪೂರೈಸಿದ ಕೊಳವೆಬಾವಿಗಳ ವಿವರ:

ವರ್ಷ	ವಿದ್ಯುಚ್ಛಕ್ತಿ ಪೂರೈಸಿದ ಕೊಳವೆ ಬಾವಿಗಳ ಸಂಖ್ಯೆ
2006–07	1566
2007–08	3915
2008–09	7884

ಅಲ್ಪಸಂಖ್ಯಾತರ ಇಲಾಖೆಯಿಂದ ಶಾದಿಮಹಲ್ ಮತ್ತು ಸಮುದಾಯ ಭವನ ನಿರ್ಮಿಸುವುದು

929 (1131) **ಶ್ರೀ ಶಿವಲಿಂಗೇಗೌಡ ಕೆ.ಎಂ (ಅರಸೀಕೆರೆ) :** ಮಾನ್ಯ ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅಲ್ಪಸಂಖ್ಯಾತರ ಇಲಾಖೆಯಲ್ಲಿ ಅಲ್ಪಸಂಖ್ಯಾತರಿಗೆ ಶಾದಿಮಹಲ್‌ಗಳ ಮತ್ತು ಸಮುದಾಯ ಭವನ ನಿರ್ಮಾಣಕ್ಕೆ ಈಗ ಜಾರಿಯಲ್ಲಿರುವ ನಿಯಮಗಳಾವುವು;

ಆ) ಈ ನಿಯಮಗಳನ್ನು ಸಡಿಲಿಸಲು ಸಾಧ್ಯವಿಲ್ಲವೇ (ಮಾಹಿತಿ ನೀಡುವುದು);

ಪ್ರೊ.ಡಾ॥ ಮುಮ್ತಾಜ್ ಅಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :

ಅ) ಅಲ್ಪಸಂಖ್ಯಾತರ ಶಾದಿಮಹಲ್/ಸಮುದಾಯ ಭವನ ನಿರ್ಮಾಣಕ್ಕೆ ಕೆಳಕಂಡ ನಿಯಮಗಳು ಜಾರಿಯಲ್ಲಿರುತ್ತವೆ.